ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ದೇವದಾಸಿ ಪುನರ್ವಸತಿ ಯೋಜನೆಯ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

736 (666) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ದೇವದಾಸಿ ಪುನರ್ವಸತಿ ಯೋಜನೆಯ ಅನ್ವಯ ಕೈಗೊಂಡ ಕಾರ್ಯಕ್ರಮಗಳೇನು; ಕಳೆದ 5 ವರ್ಷಗಳಲ್ಲಿ ಎಷ್ಟು ದೇವದಾಸಿಯರಿಗೆ ಪುರ್ನವಸತಿ ಕಲ್ಪಿಸಲಾಗಿದೆ; ದೇವದಾಸಿಯರ ಜೀವನೋಪಾಯಕ್ಕೆ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿರುವ ಮಾಜಿ ದೇವದಾಸಿಯರ ಸಂಖ್ಯೆ ಎಷ್ಟು; ದೇವದಾಸಿ ಪದ್ಧತಿಯನ್ನು ನಿರ್ಮೂಲನೆಗೊಳಿಸಲು ಕೈಗೊಂಡ ಕ್ರಮಗಳೇನು ;

(ಇ) ಮಾಜಿ ದೇವದಾಸಿಯರಿಗೆ ವಸತಿ ಯೋಜನೆಯ ಅನ್ವಯ ಇದುವರೆಗೆ ಎಷ್ಟು ಮನೆಗಳನ್ನು ವಿತರಿಸಲಾಗಿದೆ; ಎಷ್ಟು ಫಲಾನುಭವಿಗಳನ್ನು ಗುರುತಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಈ) ಮಾಜಿ ದೇವದಾಸಿಯರಿಗೆ ಕನಿಷ್ಠ ರೂ.5000/- ಮಾಸಶನ ನೀಡುವ ಕುರಿತು ಸರ್ಕಾರದ ನಿಲುವೇನು?